ಶ್ರೀ ಎಂ. ರಾಮಪ್ಪ —ಅದು ಕನ್ನಡದಲ್ಲಿದೆ. ಕನ್ನಡವನ್ನು ಓದುವುದಕ್ಕೆ ನನಗೆ ಬರಂವುದಿಲ್ಲ. ಇನ್ನೂ ಮೇಲೆ ತೆಲುಗಿನಲ್ಲೇ ಬರೆದುಕೊಂಡು ಬರಬೇಕಾಗುತ್ತದೆ.

ಅಧ್ಯಕ್ಷರು.—ಹಾಗಾದರೆ ನಿಮ್ಮ ಪರವಾಗಿ ನಾನೇ ಅದನ್ನು ಓದಿ ಹೇಳುತ್ತೇನೆ.

"ಪ್ರತಿ ವರ್ಷ ಮೇಲ್ದಂಡೆ ಕಾಲುವೆಯನ್ನು (ತುಂಗಭದ್ರಾ) ಮಾರ್ಚಿ ತಿಂಗಳಲ್ಲಿ ಮುಚ್ಚಲಾಗುತ್ತಿತ್ತು. ಆದರೆ ಈ ವರ್ಷ ಜಲಾಶಯದಲ್ಲಿ ಸಾಕಷ್ಟು ನೀರಿದ್ದರೂ ಕಾಲುವೆಯನ್ನು ಮುಚ್ಚಿರುವುದರಿಂದ ಪೈರುಗಳು ಒಣಗಿಹೋಗಿ ರೈತರಿಗೆ ನಷ್ಟವಾಗುವ ಪ್ರಸಂಗ ಬಂದಿದೆ. ಸರ್ಕಾರ ಕೂಡಲೇ ಈ ಕಾಲುವೆಯನ್ನು ಮುಚ್ಚದೇ ಪ್ರತಿ ವರ್ಷದಂತೆ ಮಾರ್ಚಿ ತಿಂಗಳವರೆಗೂ ನೀರನ್ನು ಬಿಡಲು ಸೂಕ್ತ ಆಜ್ಞೆ ಮಾಡಬೇಕಾಗಿ ವಿನಂತಿಸುತ್ತೇನೆ." ಎಂದು ಇದೆ.

ಶ್ರೀ ಎ. ಲಕ್ಷ್ಮೀಸಾಗರ್.— ಮಾನ್ಯ ಅಧ್ಯಕ್ಷರೇ, ಇದಕ್ಕೆ ಸಂಬಂಧಪಟ್ಟ ಮಂತ್ರಿಗಳು ಇಲ್ಲವಾದ್ದರಿಂದ ಅವರಿಂದ ಉತ್ತರವನ್ನು ತರಿಸಿಕೊಡುವುದಕ್ಕೆ ವ್ಯವಸ್ಥೆ ಮಾಡುತ್ತೇನೆ. ಈಗಾಗಲೇ ಮಾನ್ಯ ಸದಸ್ಯರು ಸಂಬಂಧಪಟ್ಟ ಸಚಿವರ ಜೊತೆಯಲ್ಲಿ ಇದರ ಬಗ್ಗೆ ಚರ್ಚೆ ಮಾಡಿದ್ದಾರೆಂದು ತಿಳಿದಿದ್ದೇನೆ.

ಶ್ರೀ ಎಂ. ರಾಮಪ್ಪ.—ನಾನು ಅವರ ಜೊತೆಯಲ್ಲಿ ಚರ್ಚೆ ನಡೆಸಿಲ್ಲ.

ಅಧ್ಯಕ್ಷರು.—ನಾನು ಉತ್ತರ ತರಿಸಿಕೊಡುತ್ತೇನೆ.

ಶ್ರೀ ಕೆ. ಮಲ್ಲಪ್ಪ.— ಮಾನ್ಯ ಅಧ್ಯಕ್ಷರೇ, ಮಾನ್ಯ ರಾಮಪ್ಪನವರು

ಶ್ರೀ ಎಂ. ರಾಮಪ್ಪ:—ಮಾನ್ಯ ಮಲ್ಲಪ್ಪನವರು ನನ್ನ ಬಗ್ಗೆ ಏನೋ ಹೇಳುತ್ತಿದ್ದಾರೆ.

ಅಧ್ಯಕ್ಷರು.—ನೀವು ಇಬ್ಬರು ಮಾತನಾಡಿದ್ದೂ ರೆಕಾರ್ಡ್‌ಗೆ ಹೋಗುವುದಿಲ್ಲ.

(೯) ಮೈಸೂರು ಸಿಟಿ ಕಾರ್ಪೋರೇಷನಿನಲ್ಲಿ ಟ್ಯಾಕ್ಸ್ ಇನ್ಸ್‌ಪೆಕ್ಟರ್‌ರವರ ಹುದ್ದೆಯನ್ನು ಒಂದನೇ ದರ್ಜೆಗೆ ಏರಿಸುವುದು

ಶ್ರೀ ವೇದಾಂತ ಹೆಮ್ಮಿಗೆ(ಕೃಷ್ಣರಾಜ).—ಮಾನ್ಯ ಅಧ್ಯಕ್ಷರೇ, ಮೈಸೂರು ನಗರ ಕಾರ್ಪೋರೇಷನ್‌ನ ಒನೇ ದರ್ಜೆ ಟ್ಯಾಕ್ಸ್ ಇನ್‌ಸ್ಪೆಕ್ಟರ್ ಹುದ್ದೆಯನ್ನು ಮೊದಲನೇ ದರ್ಜೆ ಟ್ಯಾಕ್ಸ್ ಇನ್‌ಸ್ಪೆಕ್ಟರ್ ವೇತನ ಶ್ರೇಣಿಗೆ ಏರಿಸಿ ತಕ್ಷಣ ಜಾರಿಗೆ ಕೊಡಬೇಕೆಂದು ಸರ್ಕಾರ ೨೦-೫-೧೯೬೫ ರಂದು ಆಜ್ಞೆಯನ್ನು ಹೊರಡಿಸಿದ್ದರೂ ಅದು ಇದುವರೆಗೂ ಜಾರಿಗೆ ಬಂದಿಲ್ಲ. ಇದರ ಬಗ್ಗೆ ಹೈಕೋರ್ಟ್ ಸಹ ಆದೇಶ ನೀಡಿದೆ ಎಂದು ತಿಳಿದುಬಂದಿದೆ. ಸರ್ಕಾರ ಇದರ ಬಗ್ಗೆ ಕೈಗೊಂಡಿರುವ ಕ್ರಮವೇನು ಎಂಬುದರ ಬಗ್ಗೆ ಮಾನ್ಯ ಸಚಿವರ ಗಮನ ಸೆಳೆಯಲು ಇಚ್ಛಿಸುತ್ತೇನೆ.

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳ ಮತ್ತು ನಗರಾಭಿವೃದ್ಧಿ ಸಚಿವರು).—ಮಾನ್ಯ ಅಧ್ಯಕ್ಷರೇ, ಹೈಕೋರ್ಟ್ ಆದೇಶ ನೀಡಿದೆ ಎಂದು ತಿಳಿದು ಬಂದಿದೆಯೆಂದು ಮಾನ್ಯ ಸದಸ್ಯರು ಹೇಳಿದ್ದಾರೆ. ಹೈಕೋರ್ಟಿನ ಆದೇಶದ ಪ್ರಕಾರ ನಾವು ನಡೆದುಕೊಳ್ಳಬೇಕಾಗುತ್ತದೆಂಬುದನ್ನು ಮಾನ್ಯ ಸದಸ್ಯರಿಗೆ ಹೇಳಬಯಸುತ್ತೇನೆ.

೧–೦೦ ಪಿ. ಎಂ.

ರಾಜ್ಯಪಾಲರ ಭಾಷಣಕ್ಕೆ ಸಲ್ಲಿಸಂವ ವಂದನಾರ್ಪಣಾ ನಿರ್ಣಯದ ಮೇಲಿನ ಚರ್ಚೆ

† ಶ್ರೀ ಕೆ. ಎಂ. ಕೃಷ್ಣಾರೆಡ್ಡಿ (ಚಿಂತಾಮಣಿ).—ಮಾನ್ಯ ಅಧ್ಯಕ್ಷರೆ, ಮಾನ್ಯ ರಾಜ್ಯಪಾಲರು ಉಭಯ ಸದನಗಳನ್ನೂ ಕುರಿತು ಮಾಡಿದ ಭಾಷಣ ಬಗ್ಗೆ ಮಂಡಿಸಿದ ಅಭಿನಂದನಾ ನಿರ್ಣಯವನ್ನು ಸ್ವಾಗತಿಸುತ್ತಾ ಒಂದೆರಡು ಮಾತನ್ನು ನಾನೂ ಹೇಳಬಯಸುತ್ತೇನೆ.

---

†ಈ ಚಿಹ್ನೆ ಸಂಬಂಧಪಟ್ಟ ಸದಸ್ಯರು ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.